**Bangalore**
**Regional News**
**25.07.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

<u>ಮುಖ್ಯಾಂಶಗಳು</u>

1. ರಾಜ್ಯಕ್ಕೆ ಅಗತ್ಯ ರಸಗೊಬ್ಬರ ಪೂರೈಸುವಂತೆ ಕೇಂದ್ರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಒತ್ತಾಯ
2. ಮಂಡ್ಯ ವೈದ್ಯಕೀಯ ಕಾಲೇಜು ಮೇಲ್ದರ್ಜೆಗೆ ರಾಜ್ಯ ಸರ್ಕಾರ ನಿರ್ಧಾರ
3. ಬೆಂಗಳೂರು ಕಾಲ್ತುಳಿತ ಪ್ರಕರಣ : ನ್ಯಾಯಮೂರ್ತಿ ಕುನ್ಹಾ ಆಯೋಗದ ವರದಿ ಹಂತ ಹಂತವಾಗಿ ಅನುಷ್ಠಾನ
4. ಚುನಾವಣಾ ಆಯೋಗ ಕುರಿತ ರಾಹುಲ್ ಗಾಂಧಿ ಹೇಳಿಕೆಗೆ ರಾಜ್ಯ ಬಿಜೆಪಿ ಖಂಡನೆ

<><><><>

ರಾಜ್ಯದ ರೈತರ ಸಂಕಷ್ಟ ಪರಿಹರಿಸಲು ಕೊರತೆಯಿರುವ ೧.೭೫ ಲಕ್ಷ ಮೆಟ್ರಿಕ್ ಟನ್ ಯೂರಿಯಾ ರಸಗೊಬ್ಬರ ಪೂರೈಸುವಂತೆ ಕೇಂದ್ರ ಸರ್ಕಾರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಒತ್ತಾಯಿಸಿದ್ದಾರೆ. ಈ ಸಂಬಂಧ ಕೇಂದ್ರ ಸಚಿವ ಜೆ.ಪಿ. ನಡ್ಡಾ ಅವರಿಗೆ ಪತ್ರ ಬರೆದಿರುವ ಮುಖ್ಯಮಂತ್ರಿ ಪ್ರಸಕ್ತ ಮುಂಗಾರಿನಲ್ಲಿ ಕೇಂದ್ರ ಸರ್ಕಾರ ೧೧.೧೭ ಲಕ್ಷ ಮೆಟ್ರಿಕ್ ಟನ್ ಹಂಚಿಕೆ ಮಾಡಿದೆ. ಆದರೆ ಕರ್ನಾಟಕ ಇಲ್ಲಿಯವರೆಗೆ ಕೇವಲ ೫.೧೭ ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರ ಸ್ವೀಕರಿಸಿದೆ ಎಂದು ತಿಳಿಸಿದ್ದಾರೆ. ಜುಲೈವರೆಗೂ ೭.೮ ಲಕ್ಷ ಮಟ್ರಿಕ್ ಟನ್ ರಸಗೊಬ್ಬರದ ಅಗತ್ಯವಿರುವುದಾಗಿ ಮುಖ್ಯಮಂತ್ರಿ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

<><><><>

ಮಂಡ್ಯ ವೈದ್ಯಕೀಯ ಕಾಲೇಜು ಮೇಲ್ದರ್ಜೆಗೆರಿಸುವ ಜೊತೆಗೆ ನವೀಕರಣ ಕಾಮಗಾರಿಗಳಿಗೆ ಅಗತ್ಯ ವೈದ್ಯರು ಸಿಬ್ಬಂದಿ ವರ್ಗ ಹಾಗೂ ಅನುದಾನ ಒದಗಿಸಲಾಗುವುದು ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದ್ದಾರೆ. ಈ ಸಂಬಂಧ ಇತ್ತೀಚೆಗೆ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಮತ್ತು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ವಿಸ್ತೃತ ಚರ್ಚೆ ನಡೆಸಿದ್ದು, ವೈದ್ಯಕೀಯ ಕಾಲೇಜು ಅಭಿವೃದ್ಧಿಗೆ ಎಲ್ಲ ರೀತಿಯ ಅಗತ್ಯ ನೆರವಿನ ಭರವಸೆ ನೀಡಿರುವುದಾಗಿ ಜಿಲ್ಲಾ ಉಸ್ತುವಾರಿ ಸಚಿವರು ಹೇಳಿಕೆಯಲ್ಲಿ ತಿಳಿಸಿದ್ದಾರೆ. ಜಿಲ್ಲಾಸ್ಪತ್ರೆಯನ್ನು ೮೫೦ ಹಾಸಿಗೆಗಳ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸುವ ಅಗತ್ಯವಿದ್ದು, ತುರ್ತು ಚಿಕಿತ್ಸಾ, ಲಘು ಶಸ್ತ್ರ ಚಿಕಿತ್ಸಾ ಘಟಕಗಳ ಕೊಠಡಿ ನವೀಕರಣ, ಕ್ಯಾನ್ಸರ್

ಚಿಕಿತ್ಸಾ ಘಟಕ ಸೇರಿದಂತೆ ಹಲವು ಕಾಮಗಾರಿಗಳನ್ನು ಪಟ್ಟಿ ಮಾಡಿ ವಿಸ್ತೃತ ಯೋಜನೆಯ ಪ್ರಸ್ತಾವನೆ ಸಲ್ಲಿಸುವಂತೆ ಉಭಯ ಸಚಿವರಿಗೆ ಮನವಿ ಮಾಡಲಾಗಿದೆ ಎಂದು ಚಲುವರಾಯಸ್ವಾಮಿ ತಿಳಿಸಿದ್ದಾರೆ.

<><><><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತ ಘಟನೆ ಕುರಿತ ನ್ಯಾಯಮೂರ್ತಿ ಕುನ್ಹಾ ಆಯೋಗದ ವರದಿಯನ್ನು ರಾಜ್ಯ ಸರ್ಕಾರ ಒಪ್ಪಿಕೊಂಡಿದ್ದು, ಶಿಫಾರಸ್ಸುಗಳನ್ನು ಹಂತ ಹಂತವಾಗಿ ಅನುಷ್ಠಾನಗೊಳಿಸಲು ಪ್ರಯತ್ನಿಸಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಲ್ತುಳಿತ ಘಟನೆಗೆ ಸಂಬಂಧಿಸಿದಂತೆ ಆರ್‌ಸಿಬಿ, ಡಿಎನ್‌ಎ ಕಂಪನಿ ವಿರುದ್ಧದ ಪ್ರಕರಣಗಳು ಹೈಕೋರ್ಟ್‌ನಲ್ಲಿ ಮುಂದುವರೆಯಲಿದ್ದು, ಆಯೋಗದ ಇತರ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ಪ್ರಯತ್ನಿಸುತ್ತದೆ ಎಂದು ಹೇಳಿದರು. ಪೊಲೀಸ್ ಅಧಿಕಾರಿಗಳನ್ನು ಈಗಾಗಲೇ ಅಮಾನತುಗೊಳಿಸಲಾಗಿದೆ. ಇಲಾಖಾ ವಿಚಾರಣೆಗೆ ಒಳಪಡಿಸಲು ಸರ್ಕಾರ ತೀರ್ಮಾನಿಸಿದೆ. ಮುಂದಿನ ಪಂದ್ಯಗಳಲ್ಲಿ ಜನಸಮೂಹ ನಿಯಂತ್ರಣ ಸೇರಿದಂತೆ ವರದಿಯಲ್ಲಿನ ಇತರ ಶಿಫಾರಸ್ಸುಗಳನ್ನು ಸರ್ಕಾರ ಪರಿಗಣಿಸುತ್ತದೆ ಎಂದರು.

ಧ್ವನಿ : ಪರಮೇಶ್ವರ್ (೩೦ ಸೆಕೆಂಡ್‌ಗಳು)

ಇದೇ ವೇಳೆ ಪ್ರತಿಪಕ್ಷ ಬಿಜೆಪಿ ಆರೋಪಗಳನ್ನು ನಿರಾಕರಿಸಿದ ಸಚಿವರು, ವಿಪಕ್ಷದ ಉತ್ತಮ ಸಲಹೆ-ಸೂಚನೆಗಳನ್ನು ಪರಿಗಣಿಸುವುದಾಗಿ ತಿಳಿಸಿದರು.

<><><><>

ಹಾವೇರಿ ಜಿಲ್ಲೆ ರಟ್ಟೆಹಳ್ಳಿ ತಾಲೂಕಿನ ಮದಗ-ಮಾಸೂರು ಕೆರೆಯ ಎಡದಂಡೆ ಹಾಗೂ ಬಲದಂಡೆ ಮುಖ್ಯ ಕಾಲುವೆಗಳ ಆಧುನೀಕರಣಕ್ಕೆ ೫೨ ಕೋಟಿ ೨೦ ಲಕ್ಷ ರೂಪಾಯಿಗಳ ಅಂದಾಜು ವೆಚ್ಚದ ಕಾಮಗಾರಿಗೆ ರಾಜ್ಯ ಸಚಿವ ಸಂಪುಟ ಸಭೆ ಆಡಳಿತಾತ್ಮಕ ಅನುಮೋದನೆ ನೀಡಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ. ರೈತರ ಬೇಡಿಕೆಯಂತೆ ಎರಡೂ ಕಾಲುವೆಗಳ ಆಧುನೀಕರಣ ಮತ್ತು ದುರಸ್ತಿ ಕಾರ್ಯ ನಡೆಯಲಿದ್ದು, ೭೧೫ ಹೆಕ್ಟೇರ್ ಕೃಷಿ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಲು ಅವಕಾಶವಾಗಲಿದೆ ಎಂದು ಸಚಿವರು ತಿಳಿಸಿದರು. ಅಲ್ಲದೇ ತೂಗುಕಾಲುವೆ, ರಸ್ತೆ ಸೇತುವೆಗಳ ದುರಸ್ತಿ ಹಾಗೂ ಪುನರ್ ನಿರ್ಮಾಣ ಸೇರಿದಂತೆ ಮತ್ತಿತರ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಸಚಿವರು ಮಾಹಿತಿ ನೀಡಿದ್ದಾರೆ.

<><><><>

ಕಳೆದ ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕದಲ್ಲಿಯೂ ಕೇಂದ್ರ ಚುನಾವಣಾ ಆಯೋಗವನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ ಎಂಬ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಹೇಳಿಕೆ ಪ್ರಜಾಪ್ರಭುತ್ವ ವಿರೋಧಿ ನಡೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಟೀಕಿಸಿದ್ದಾರೆ. ಬೆಂಗಳೂರಿನ ಪಕ್ಷದ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಂವಿಧಾನಿಕ ಸಂಸ್ಥೆ ಬಗ್ಗೆ ರಾಹುಲ್ ಗಾಂಧಿ ಅನುಮಾನ ವ್ಯಕ್ತಪಡಿಸಿರುವುದು ಖಂಡನೀಯ ಎಂದರು. ರಾಹುಲ್‌ಗಾಂಧಿ ಮಾತಿಗೆ ಧ್ವನಿಗೂಡಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರಾಜ್ಯದ ಜನರ ಕ್ಷಮೆ ಕೋರಬೇಕು ಎಂದು ಅವರು ಒತ್ತಾಯಿಸಿದರು.

<><><><>

ಹಾವೇರಿ ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ೫೯ ಸಾವಿರ ೫೦೭ ಟನ್ ಯೂರಿಯಾ ರಸಗೊಬ್ಬರ  ಪೂರೈಕೆಯಾಗಿದ್ದು, ಹೆಚ್ಚುವರಿಯಾಗಿ ೮ ಸಾವಿರ ಟನ್ ಪೂರೈಸುವಂತೆ ಇಲಾಖೆಗೆ ಬೇಡಿಕೆ ಸಲ್ಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ : ವಿಜಯ ಮಹಾಂತೇಶ ದಾನಮ್ಮ (೨೭ ಸೆಕೆಂಡ್‌ಗಳು)

<><><><>

ಸುಪ್ರೀಂ ಕೋರ್ಟ್ ಆದೇಶದಂತೆ ಆಗಸ್ಟ್ ೧ ರೊಳಗೆ ಪರಿಶಿಷ್ಟ ಸಮುದಾಯದಲ್ಲಿ ಒಳಮೀಸಲಾತಿ ಕಲ್ಪಿಸದಿದ್ದರೆ ರಾಜ್ಯ ಸರ್ಕಾರದ ವಿರುದ್ಧ ರಾಜ್ಯಾದ್ಯಾಂತ ಪ್ರತಿಭಟನೆ ನಡೆಸಲಾಗುವುದು ಎಂದು ಸಂಸದ ಗೋವಿಂದ ಕಾರಜೋಳ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಒಳ ಮೀಸಲಾತಿ ನೀಡಲು ಸುಪ್ರೀಂಕೋರ್ಟ್ ಆದೇಶ ನೀಡಿ ಒಂದು ವರ್ಷವಾಗಿದೆ. ಕೇರಳ, ತಮಿಳುನಾಡಿನಲ್ಲಿ ಈಗಾಗಲೇ ಮೀಸಲಾತಿ ಜಾರಿಗೆ ತರಲಾಗಿದೆ. ಆದರೆ ಕರ್ನಾಟಕದಲ್ಲಿ ಇನ್ನು ಜಾರಿಯಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ರಾಜ್ಯ ಸರ್ಕಾರಕ್ಕೆ ಆಗಸ್ಟ್ ೧ ರವರೆಗೆ ಗಡುವು ನೀಡಲಾಗುತ್ತಿದ್ದು, ನ್ಯಾಯಮೂರ್ತಿ ನಾಗಮೋಹನ ದಾಸ್ ವರದಿ ಅನುಷ್ಠಾನವಾಗಬೇಕು. ಇಲ್ಲವಾದರೆ ರಾಜ್ಯದ ಎಲ್ಲ ಜಿಲ್ಲೆಯ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ಮಾಡಲಾಗುವುದು ಎಂದು ಅವರು ಹೇಳಿದರು.

<><><><>

ಬೆಂಗಳೂರು ನಗರ ವಿಶ್ವವಿದ್ಯಾನಿಲಯ ವಿವಿಧ ವೃತ್ತಿಪರ ತರಬೇತಿ ಸಂಸ್ಥೆಗಳ ಸಹಯೋಗದಲ್ಲಿ ಇಂದು ಆಯೋಜಿಸಿರುವ ಉದ್ಯೋಗ ಮೇಳಕ್ಕೆ ಉದ್ಯಮ ವಲಯ ಹಾಗೂ ವಿದ್ಯಾರ್ಥಿಗಳಿಂದ ಅತ್ಯುತ್ತಮ ಸ್ಪಂದನೆ ವ್ಯಕ್ತವಾಗಿದೆ. ಒಟ್ಟು ೬೫ ಪ್ರಮುಖ ಕಂಪನಿಗಳು, ಸುಮಾರು ೪ ಸಾವಿರಕ್ಕೂ ಹೆಚ್ಚು ಆಕಾಂಕ್ಷಿಗಳು ಸಂದರ್ಶನದಲ್ಲಿ ಪಾಲ್ಗೊಂಡಿದ್ದಾರೆ. ಸೆಂಟ್ರಲ್ ಕಾಲೇಜಿನ ಆವರಣದಲ್ಲಿರುವ ನೂತನ ಶೈಕ್ಷಣಿಕ ವಿಭಾಗದಲ್ಲಿ ಪ್ರಭಾರ ಕುಲಪತಿ ಪ್ರೊಫೆಸರ್ ಕೆ.ಆರ್.ಜಲಜಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಪಠ್ಯಕ್ರಮ ಬೋಧನೆಯ ಜೊತೆಗೆ ಕೈಗಾರಿಕಾ ಸಂಸ್ಥೆಗಳ ಸಹಕಾರದಿಂದ ಕೌಶಲ್ಯ ಅಭಿವೃದ್ಧಿ ಮತ್ತು ತರಬೇತಿ ನೀಡುವ ಮೂಲಕ ವಿದ್ಯಾರ್ಥಿಗಳನ್ನು ವೃತ್ತಿರಂಗ ಪ್ರವೇಶಕ್ಕೆ ಸಜ್ಜುಗೊಳಿಸಲಾಗುತ್ತಿದೆ ಎಂದು ಅವರು ವಿವರಿಸಿದರು. ಕುಲಸಚಿವ ಪ್ರೊಫೆಸರ್ ಬಿ. ರಮೇಶ್ ಮಾತನಾಡಿ, ಸಾರ್ವಜನಿಕ ವಲಯದ ವಿಶ್ವವಿದ್ಯಾಲಯವಾದ ಬಿಸಿಯು ಜ್ಞಾನಜ್ಯೋತಿ ಕ್ಯಾಂಪಸ್ ಮಾತ್ರವಲ್ಲದೆ ಸಂಯೋಜಿತ ಕಾಲೇಜುಗಳ ವಿದ್ಯಾರ್ಥಿಗಳಿಗೂ ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳಲು ಅವಕಾಶ ನೀಡಿದೆ ಎಂದು ತಿಳಿಸಿದರು.

<><><><>

ಚಿಕ್ಕಮಗಳೂರು ಜಿಲ್ಲೆಯ ಕೆಲವು ಭಾಗಗಳಲ್ಲಿ ಬಿ.ಎಸ್.ಎನ್.ಎಲ್ ಗ್ರಾಹಕರಿಗೆ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ ಕೇಂದ್ರ ಸರ್ಪರ್ಕ ಖಾತೆ ಸಚಿವ ಜ್ಯೋತಿರಾಧಿತ್ಯ ಸಿಂಧ್ಯಾ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಅವರು ಮಾಹಿತಿ ಹಂಚಿಕೊಂಡಿದ್ದು, ಕೆಲವು ತಾಂತ್ರಿಕ ಸಮಸ್ಯೆಗಳ ಬಗ್ಗೆ ಕೇಂದ್ರ ಸಚಿವರಿಗೆ ವಿವರವಾಗಿ ತಿಳಿಸಿದ್ದು, ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿರುವುದಾಗಿ ಸಿ.ಟಿ. ರವಿ ತಿಳಿಸಿದ್ದಾರೆ.

<><><><>

ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲೆಗಳ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಅಧ್ಯಕ್ಷರಾಗಿ ಕೊಪ್ಪಳದ ಕಾಂಗ್ರೆಸ್ ಶಾಸಕ ಕೆ.ರಾಘವೇಂದ್ರ ಹಿಟ್ನಾಳ ಮತ್ತು ಉಪಾಧ್ಯಕ್ಷರಾಗಿ ಕಾರಟಗಿಯ ಎನ್.ಸತ್ಯನಾರಾಯಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಇವರಿಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆ ಮಾಡಿರುವುದಾಗಿ ಚುನಾವಣಾಧಿಕಾರಿ ಪ್ರಮೋದ್ ಘೋಷಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>